## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 314 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ:ತಳವಾರ್ ಸಾಬಣ್ಣ |
| ಉತ್ತರಿಸಬೇಕಾದ ದಿನಾಂಕ | : | 19.07.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಸುಮಾರು 850 ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಮೇಲೆ ಆಗಿರುವ ಲೈಂಗಿಕ ಶೋಷಣೆಗಳು ಇಲ್ಲಿಯವರೆಗೆ ಎಷ್ಟು ದಾಖಲಾಗಿವೆ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳ ಪ್ರಾಂಶುಪಾಲರು/ಬೋಧಕ/ಬೋಧಕೇತರ ಸಿಬ್ಬಂದಿಗಳ ವಿರುದ್ಧ 17 ಪ್ರಕರಣಗಳು ದಾಖಲಾಗಿರುತ್ತದೆ. |
| ಆ | ವಸತಿ ಶಾಲೆಗಳಲ್ಲಿ ವಿದ್ಯಾರ್ಥಿನಿಯರ ಮೇಲೆ ಹೆಚ್ಚು ಪೋಕ್ಸೋ ಕೇಸ್‌ಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಅದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ವಸತಿ ಶಾಲೆಗಳಲ್ಲಿ ವಿದ್ಯಾರ್ಥಿನಿಯರ ಮೇಲೆ 17 ಲೈಂಗಿಕ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 6 ಪ್ರಕರಣಗಳು ಇಲಾಖಾ ವಿಚಾರಣೆ ಮುಕ್ತಾಯವಾಗಿದ್ದು, ಅಂತಿಮ ಆದೇಶಕ್ಕೆ ಬಾಕಿಯಿರುತ್ತವೆ. 10 ಪ್ರಕರಣಗಳಲ್ಲಿ 3 ಪ್ರಕರಣಗಳು ವಿಚಾರಣೆ ಹಂತದಲ್ಲಿದ್ದು, 4 ಪ್ರಕರಣಗಳಲ್ಲಿ ಆರೋಪ ಪಟ್ಟಿ, ಜಾರಿ ಮಾಡಿದ್ದು, ಇಲಾಖಾ ವಿಚಾರಣೆ ಪ್ರಾರಂಭಿಸಬೇಕಾಗಿರುತ್ತದೆ. ಇನ್ನು ಉಳಿದ 3 ಪ್ರಕರಣಗಳಲ್ಲಿ ಆರೋಪ ಪಟ್ಟಿ ಜಾರಿ ಮಾಡಬೇಕಾಗಿರುತ್ತದೆ. ಒಂದು ಪ್ರಕರಣದಲ್ಲಿ ನೌಕರನ ಮೇಲೆ ಮಾಡಲಾದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾದ ಹಿನ್ನಲೆಯಲ್ಲಿ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿರುತ್ತದೆ. |
| ಇ | ವಸತಿ ಶಾಲೆಗಳಲ್ಲಿ ಹೆಚ್ಚು ಪೋಕ್ಸೋ ಕೇಸ್ ಗಳು ದಾಖಲಾಗಲು ಕಾರಣಗಳೇನು: ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು). | ಒಂದು ಪ್ರಕರಣದಲ್ಲಿ ನೌಕರನ ಮೇಲೆ ಮಾಡಲಾದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾದ ಹಿನ್ನಲೆಯಲ್ಲಿ ಅವರನ್ನು ಸೇವೆಯಿಂದ ವಜಾಗೊಳಿಸಲಾಗಿದೆ. |

| | | |
|---|---|---|
| ಈ | ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿನಿಯರ ಸಂರಕ್ಷಣೆಗಾಗಿ ಸರ್ಕಾರವು ಕೈಗೊಂಡ ಮುಂಜಾಗ್ರತಾ ಕ್ರಮಗಳು ಯಾವುವು? (ವಿವರ ನೀಡುವುದು). | ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿನಿಯರ ಸುರಕ್ಷತಾ ಹಿತದೃಷ್ಟಿಯಿಂದ ಈ ಕೆಳಕಂಡ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. ಕೇಂದ್ರ ಕಛೇರಿಯಿಂದ ನಿಯಮಿತವಾಗಿ ಕಾಲಕಾಲಕ್ಕೆ ವೀಡಿಯೋ ಸಂವಾದವನ್ನು ಹಮ್ಮಿಕೊಂಡು ವಿದ್ಯಾರ್ಥಿಗಳ ಸುರಕ್ಷತೆ ಹಾಗೂ ಆರೋಗ್ಯದ ಕುರಿತು ಸಲಹೆ/ಸೂಚನೆಗಳನ್ನು ನೀಡಲಾಗುತ್ತಿದೆ.<br>2. ವಿದ್ಯಾರ್ಥಿನಿಯರು ವಿಶೇಷವಾಗಿ ವೈಯಕ್ತಿಕ ಸಮಸ್ಯೆ ಇದ್ದಲ್ಲಿ ಆಪ್ತ ಸಮಾಲೋಚನಾ ಸಲಹಾ ಪೆಟ್ಟಿಗೆಯನ್ನು ಸುರಕ್ಷಿತ ಸ್ಥಳದಲ್ಲಿಟ್ಟು ಅದರ ಉಸ್ತುವಾರಿಯನ್ನು ಮಹಿಳಾ ಸಿಬ್ಬಂದಿಗೆ ವಹಿಸಲು ಸೂಚಿಸಲಾಗಿರುತ್ತದೆ ಹಾಗೂ ಅಸ್ವಾಭಾವಿಕ ಪ್ರಕರಣ, ಅವಘಡ, ಹಾಗೂ ವಿಶೇಷ ಪ್ರಕರಣಗಳು ಕಂಡು ಬಂದಲ್ಲಿ 24 ಘಂಟೆಯೊಳಗಾಗಿ ಕೇಂದ್ರ ಕಚೇರಿಗೆ ವರದಿಯನ್ನು ಸಲ್ಲಿಸಲು ಸೂಚಿಸಲಾಗಿರುತ್ತದೆ.<br>3. ಕೇಂದ್ರ ಕಛೇರಿಯಿಂದ ನೇಮಕಗೊಂಡ ಜಿಲ್ಲಾ ನೋಡಲ್ ಅಧಿಕಾರಿಗಳು 24 ಗಂಟೆಯೊಳಗೆ ಸಂಬಂಧಿಸಿದ ಶಾಲೆಗೆ ಭೇಟಿ ನೀಡಿ ಪ್ರಕರಣ ಹಾಗೂ ಕರ್ತವ್ಯ ನಿರ್ಲಕ್ಷ ವಹಿಸಿದ ಸಿಬ್ಬಂದಿಯ ಕುರಿತು ಮಾಹಿತಿಯೊಂದಿಗೆ ವರದಿಯನ್ನು ಸಲ್ಲಿಸಲು ಸೂಚಿಸಲಾಗಿರುತ್ತದೆ.<br>4. ಪ್ರಾಂಶುಪಾಲರು, ನಿಲಯಪಾಲಕರು, ಸ್ಟಾಫ್ ನರ್ಸ್ ಮತ್ತು ಹಿರಿಯ ಮಹಿಳಾ ಶಿಕ್ಷಕರನ್ನೊಳಗೊಂಡ ಒಂದು ಆರೋಗ್ಯ ಸಮಿತಿಯನ್ನು ಶಾಲಾ ಹಂತದಲ್ಲಿ ರಚಿಸಿ, ಸದರಿ ಸಮಿತಿಯು ಪ್ರತಿ ತಿಂಗಳು ಸಭೆ ಸೇರಿ ವಿದ್ಯಾರ್ಥಿಗಳ ಆರೋಗ್ಯವನ್ನು ಪರಿಶೀಲಿಸಿ ವ್ಯತ್ಯಾಸ ಕಂಡು ಬಂದಲ್ಲಿ ವಿಶೇಷ |

| | | |
|---|---|---|
| | | ಪರಿಶೀಲನೆ ನಡೆಸಲು ವೈದ್ಯಾಧಿಕಾರಿಗಳಿಗೆ ಶಿಫಾರಸ್ಸು ಮಾಡಿ ಕ್ರಮ ಕೈಗೊಳ್ಳಲು ಪ್ರಾಂಶುಪಾಲರಿಗೆ ಆದೇಶಿಸಲಾಗಿರುತ್ತದೆ. ಮೇಲ್ಕಂಡ ಎಲ್ಲಾ ಅಂಶಗಳನ್ನು ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಲಾಗಿದೆ.<br>5. ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿ ನಿಲಯಗಳಲ್ಲಿ ಹೆಣ್ಣು ಮಕ್ಕಳ ಸುರಕ್ಷೆಗಾಗಿ ಪ್ರತ್ಯೇಕ ವಸತಿ ನಿಲಯಗಳಿದ್ದು, ವಸತಿ ನಿಲಯಗಳಲ್ಲಿ ಸಿ.ಸಿ. ಕ್ಯಾಮರಗಳನ್ನು ಅಳವಡಿಸಲಾಗಿದೆ.<br>6. ಹೆಣ್ಣು ಮಕ್ಕಳ ವಸತಿ ಶಾಲೆಗಳ ನಿಲಯಗಳಲ್ಲಿ ಮಹಿಳಾ ಸ್ಟಾಫ್ ನರ್ಸ್‌ಗಳನ್ನು ನೇಮಿಸಲಾಗಿದೆ.<br>7. ಹೆಣ್ಣು ಮಕ್ಕಳ ವಸತಿ ನಿಲಯಗಳಲ್ಲಿ ರಾತ್ರಿ ವೇಳೆ ಹೆಣ್ಣು ಮಕ್ಕಳಿಗೆ ಹೊರತು ಪಡಿಸಿ, ಇತರೆ ಸಿಬ್ಬಂದಿಗಳಿಗೆ ಪ್ರವೇಶಕ್ಕೆ ಅವಕಾಶವಿರುವುದಿಲ್ಲ.<br>8. ವಿದ್ಯಾರ್ಥಿನಿಯರು ಪ್ರತಿಕೂಲ ಸಂದರ್ಭಗಳಲ್ಲಿ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಕಾಲಕಾಲಕ್ಕೆ "ಕರಾಟೆ ಆತ್ಮ ರಕ್ಷಣಾ ಕಲೆ "ತರಬೇತಿಯನ್ನು ನೀಡಲಾಗುತ್ತಿದೆ.<br>9. ಸರ್ಕಾರದ ಆದೇಶ ಸಂಖ್ಯೆ: ಸಕಇ 136 ಪಕವಿ 2023, ದಿನಾಂಕ:31.08.2023 ರನ್ವಯ ಎಲ್ಲಾ ನಿಲಯಾರ್ಥಿಗಳಲ್ಲಿ Good Touch/Bad Touch ಬಗ್ಗೆ ಅರಿವು ಮೂಡಿಸಲಾಗಿದೆ. |

ಸಕಇ 173 ಎಂಡಿಎಸ್ 2024

(ಡಾ.ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.